**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>**
**<u>ಸಿ.ಸಿ.389/2022</u>**

| | | |
|---|---|---|
| ಸಾಕ್ಷಿದಾರರ ಹೆಸರು | : ವೆಂಕಟೇಶ್ ಮೂರ್ತಿ ಬಿ.ಎ. | ಫ್ರಾಸಾ-9 |
| ತಂದೆಯ ಹೆಸರು | : ಅಣ್ಣಪ್ಪಶೆಟ್ಟಿ ಬಿ.ಎಸ್. | ಚಾಸಾ-23 |
| ವಯಸ್ಸು | : 61 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ನಿವೃತ್ತ ಎ.ಎಸ್.ಐ | ದಿನಾಂಕಃ24.10.2025. |
| ವಾಸಸ್ಥಳ | : ಚಿಕ್ಕಮಗಳೂರು | |

**<u>:ಮುಖ್ಯ ವಿಚಾರಣೆಃ ಫ್ರಾಪ್ರ್ಯಾಸ.ಸ.ಅ. ರವರಿಂದ:</u>**

ನಾನು ದಿ.30.11.2017 ರಿಂದ 30.06.2024 ರವರೆಗೂ ಮೂಡಿಗೆರೆ ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿ.22.11.2021 ರಂದು ನಾನು ಠಾಣಾ SHO ಕರ್ತವ್ಯದಲ್ಲಿ ಇದ್ದಾಗ ಸ.4.30 ರ ಸಮಯಕ್ಕೆ ಚಾಸಾ-22 ರವರು ಠಾಣೆಗೆ ಹಾಜರಾಗಿ ತಾವು ಹಾಸನದ ಜಿಲ್ಲಾ ಆಸ್ಪತ್ರೆಯಲ್ಲಿ ಚಾಸಾ-1 ರವರ ಹೇಳಿಕೆಯನ್ನು ದಾಖಲಿಸಿಕೊಂಡಿರುವುದಾಗಿ ಸದರಿ ಹೇಳಿಕೆಯನ್ನು ಹಾಜರುಪಡಿಸಿದ್ದು ಅದನ್ನು ಸ್ವೀಕರಿಸಿಕೊಂಡು ಠಾ.ಮೊ.ಸಂ.192/2021 ಕ್ಕೆ ಅಳವಡಿಸಿ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆ ಸಂಬಂಧ ಚಾಸಾ-24 ರವರಿಗೆ ನೀಡಿರುತ್ತೇನೆ.

ಸಾಕ್ಷಿಯು ನಿಪಿ-1 ರ ದೂರು ಮತ್ತು ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ನಿಪಿ-1 ರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಸಿ), ಪ್ರ.ವ.ವರದಿಯನ್ನು ನಿಪಿ-15, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಂ.ಎಂ.ಆರ್. ವಕೀಲರಿಂದಃ</u>**

ನಿಪಿ-1 ರಲ್ಲಿ ಯಾವ ದಿನಾಂಕ ಘಟನೆಯಾಗಿತ್ತು ಎಂದು ನಾನು ಪರಿಶೀಲಿಸಿರಲಿಲ್ಲ. ದೂರು ದಾಖಲಿಸಲು ಆಗಿರುವ ವಿಳಂಬದ ಬಗ್ಗೆ ಪರಿಶೀಲಸಲಾಗಿದೆಯ ಎನ್ನುವ ಪ್ರಶ್ನೆಗೆ ಸಾಕ್ಷಿಯು ಚಾಸಾ-1 ರವರು ಚಿಕಿತ್ಸೆ ಪಡೆಯುತ್ತಿದ್ದ ಕಾರಣ ವಿಳಂಬವಾಗಿದೆ ಎಂದು ನುಡಿಯುತ್ತಾರೆ. ಯಾರದರು ಹಲ್ಲೆಗೊಳಗಾಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ಹೋದರೆ MLC ಇಂಟಿಮೇಷನ್ ನೀಡಲಾಗುತ್ತದೆ ಎಂದರೆ ಸರಿ. ನಾನು SHO ಕರ್ತವ್ಯದಲ್ಲಿ ಇದ್ದಾಗ ಚಾಸಾ-1 ರವರ ಸಂಬಂಧ MLC ಇಂಟಿಮೇಷನ್ ಬಂದಿರಲಿಲ್ಲ. ನನಗೆ ಯಾವುದೇ ವರದಿ ನೀಡದೇ ಇದ್ದರೂ ಸಹಾ ಇಲಾಖಾ ಅಂಕಿಅಂಶಕ್ಕೋಸ್ಕರ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೂ ಪ್ರಕರಣಕ್ಕೂ ಒಂದಕ್ಕೊಂದು ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಅಂಶಗಳು ಸುಳ್ಳು ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.